ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 12–10–2020

# ಮಾಧ್ಯಮ ಆಮಂತ್ರಣ

1. ಪತ್ರಿಕಾಗೋಷ್ಠಿ :

ಕೆ.ಎಸ್. ಈಶ್ವರಪ್ಪ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ದಿನಾಂಕ : 13–10–2020 ಮಂಗಳವಾರ ಸಮಯ : ಅಪರಾಹ್ನ 12–00 ಗಂಟೆಗೆ

ಸ್ಥಳ : ಕೊಠಡಿ ಸಂಖ್ಯೆ 313, ಮೂರನೇ ಮಹಡಿ, ವಿಧಾನಸೌಧ, ಬೆಂಗಳೂರು

# ಪತ್ರಿಕಾ ಪ್ರಕಟಣೆ

## ಮತ ಚಲಾಯಿಸಲು ಹಾಜರುಪಡಿಸಬೇಕಾದ ಗುರುತಿನ ಚೀಟಿಗಳು

ಬೆಂಗಳೂರು, ಅಕ್ಟೋಬರ್ 12 (ಕರ್ನಾಟಕ ವಾರ್ತೆ) : ಕರ್ನಾಟಕ ವಿಧಾನ ಪರಿಷತ್ತಿನ ಬೆಂಗಳೂರು ಶಿಕ್ಷಕರ ಕ್ಷೇತ್ರ ಮತ್ತು ಕರ್ನಾಟಕ ಆಗ್ನೇಯ ಪದವೀಧರರ ಕ್ಷೇತ್ರದ ಚುನಾವಣೆಯಲ್ಲಿ ಮತದಾರರು ಮತ ಚಲಾಯಿಸಲು ಮತಗಟ್ಟೆಗಳಿಗೆ ಹೋದ ಸಂದರ್ಭದಲ್ಲಿ ಅವರು ಹೊಂದಿರುವ ಮತದಾರರ ಭಾವಚಿತ್ರವುಳ್ಳ ಗುರುತಿನ ಚೀಟಿಯನ್ನು ಹಾಜರುಪಡಿಸಬೇಕು.

ಮತದಾರರ ಭಾವಚಿತ್ರವುಳ್ಳ ಗುರುತಿನ ಚೀಟಿಯನ್ನು ಹಾಜರುಪಡಿಸಲು ಸಾಧ್ಯವಿಲ್ಲದ ಸಂದರ್ಭದಲ್ಲಿ ಚುನಾವಣಾ ಆಯೋಗ ಮಾನ್ಯ ಮಾಡಿರುವ ಆಧಾರ್ ಕಾರ್ಡ್, ಡ್ರೈವಿಂಗ್ ಲೈಸೆನ್ಸ್, ಪಾನ್ ಕಾರ್ಡ್, ಭಾರತೀಯ ಪಾಸ್‌ಪೋರ್ಟ್, ನೌಕರರಿಗೆ ರಾಜ್ಯ, ಕೇಂದ್ರ ಹಾಗೂ ಸಾರ್ವಜನಿಕ ವಲಯದ ಉದ್ದಿಮೆಗಳು, ಸ್ಥಳೀಯ ಸಂಸ್ಥೆಗಳು ನೀಡಿರುವ ಗುರುತಿನ ಚೀಟಿ, ಪದವಿ, ಡಿಪ್ಲೊಮೊಗಳ ಮೂಲ ಸರ್ಟಿಫಿಕೇಟ್, ಅಂಗವಿಕಲರ ಗುರುತಿನ ಚೀಟಿ ಹಾಜರುಪಡಿಸಿ ಮತಚಲಾಯಿಸಬಹುದು ಎಂದು ಚುನಾವಣಾಧಿಕಾರಿ, ಬೆಂಗಳೂರು ಶಿಕ್ಷಕರ

ಕ್ಷೇತ್ರ ಮತ್ತು ಕರ್ನಾಟಕ ಆಗ್ನೇಯ ಪದವೀಧರರ ಕ್ಷೇತ್ರ ಹಾಗೂ ಪ್ರಾದೇಶಿಕ ಆಯುಕ್ತು ಬೆಂಗಳೂರು ವಿಭಾಗ ಬೆಂಗಳೂರು ಇರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕನ್ನಡ ಪುಸ್ತಕಕ್ಕೆ ಬಹುಮಾನ ನೀಡಲು ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 12 (ಕರ್ನಾಟಕ ವಾರ್ತೆ) : ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯು ಸಂಗೀತ ನೃತ್ಯದಲ್ಲಿ ಪ್ರಕಟವಾಗಿರುವ ಕನ್ನಡದ ಉತ್ತಮ ಪುಸ್ತಕಕ್ಕೆ ಬಹುಮಾನ ನೀಡಲು ಅರ್ಜಿಯನ್ನು ಆಹ್ವಾನಿಸಿದೆ.

ಕರ್ನಾಟಕ ಸಂಗೀತ, ಹಿಂದೂಸ್ತಾನಿ ಸಂಗೀತ, ಸುಗಮ ಸಂಗೀತ, ನೃತ್ಯ, ಕಥಾಕೀರ್ತನ, ಗಮಕ ಈ ಕಲಾಪ್ರಕಾರಗಳಲ್ಲಿ 2020–21ನೇ ಸಾಲಿಗೆ 2019 ಜನರಿಯಿಂದ – ಡಿಸೆಂಬರ್ ಒಳಗೆ ಪ್ರಕಟಿಸಿರುವ ಪುಸ್ತಕಗಳನ್ನು ಮಾತ್ರ ಬಹುಮಾನಕ್ಕೆ ಸಲ್ಲಿಸಬಹುದು.

ಪುಸ್ತಕ ಬಹುಮಾನಕ್ಕೆ ಸಲ್ಲಿಸುವ ಪುಸ್ತಕವನ್ನು ಪಠ್ಯಕ್ಕಾಗಿ ಸಿದ್ಧಪಡಿಸಿರಬಾರದು. ಸಂಪಾದಿತ ಕೃತಿಯಾಗಿರಬಾರದು. ಸ್ವರಚಿತವಾಗಿರಬೇಕು. ಪ್ರಥಮ ಮುದ್ರಣಾವೃತ್ತಿಯಾಗಿರೇಕು. ಬಹುಮಾನಕ್ಕೆ ಅರ್ಜಿ ಸಲ್ಲಿಸುವವರು ರಿಜಿಸ್ಟ್ರಾರ್, ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ.ರಸ್ತೆ, ಬೆಂಗಳುರು–560002 ಇವರಿಗೆ ಅರ್ಜಿಯೊಂದಿಗೆ ಪುಸ್ತಕದ 4 ಪ್ರತಿಗಳನ್ನು ನವೆಂಬರ್ 15 ರೊಳಗೆ ಸಲ್ಲಿಸಬೇಕು.

ಅರ್ಜಿಯನ್ನು ಕಛೇರಿ ವೇಳೆಯಲ್ಲಿ ಅಕಾಡೆಮಿಯಿಂದ ಅಥವಾ ಆಯಾ ಜಿಲ್ಲೆಯ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಚೇರಿಯಲ್ಲಿ ಪಡೆಯಬಹುದು. ಅಥವಾ ಅಕಾಡೆಮಿ ಅಂತರ್‌ಜಾಲತಾಣ **https://karnatakasangeetanrityaacademy.com** ನಲ್ಲಿ ಪಡೆಯಬಹುದು ಎಂದು ಪ್ರಕಟಣೆ ತಿಳಿಸಿದೆ.

## ವಸತಿ ಸಚಿವರ ಪ್ರವಾಸ

ಬೆಂಗಳೂರು, ಅಕ್ಟೋಬರ್ 12 (ಕರ್ನಾಟಕ ವಾರ್ತೆ) : ವಸತಿ ಸಚಿವ ಹಾಗೂ ಕೊಡಗು ಜಿಲ್ಲಾ ಉಸ್ತವಾರಿ ಸಚಿವ ವಿ. ಸೋಮಣ್ಣ ಅವರು ಅಕ್ಟೋಬರ್ 16 ಮತ್ತು 18 ರಂದು ಕೊಡಗು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಕ್ಟೋಬರ್ 18 ರಂದೇ ಕೇಂದ್ರಸ್ಥಾನಕ್ಕೆ ಹಿಂತಿರುಗುವರು.

## ಟೋಲ್ ಫ್ರೀ ನಂಬರ್

**ಬೆಂಗಳೂರು, ಅಕ್ಟೋಬರ್ 12 (ಕರ್ನಾಟಕ ವಾರ್ತೆ) :**

**ಸಾರ್ವಜನಿಕರು ಅಬಕಾರಿ ಇಲಾಖೆಗೆ ಸಂಬಂಧಿಸಿದ ದೂರುಗಳಿಗೆ ಸಾರ್ವಜನಿಕರು ಟೋಲ್ ಫ್ರೀ ನಂಬರ್ 1800 4252 550 ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಅಬಕಾರಿ ಇಲಾಖೆಯ ಪ್ರಕಟಣೆ ತಿಳಿಸಿದೆ.**

# ಖಾತೆಗಳ ಮರುಹಂಚಿಕೆ

**ಬೆಂಗಳೂರು, ಅಕ್ಟೋಬರ್ 12 (ಕರ್ನಾಟಕ ವಾರ್ತೆ) :**

**ಮುಖ್ಯಮಂತ್ರಿಯವರ ಸಲಹೆ ಮೇರೆಗೆ ಕರ್ನಾಟಕ ರಾಜ್ಯಪಾಲರು ಕೆಲವು ಖಾತೆಗಳನ್ನು ಮರುಹಂಚಿಕೆ ಮಾಡಿದ್ದಾರೆ. ಮುಖ್ಯಮಂತ್ರಿಯವರು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ, ಹಣಕಾಸು, ಇಂಧನ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ, ಬೆಂಗಳೂರು ಅಭಿವೃದ್ಧಿ, ಯೋಜನೆ, ಗೃಹ ಇಲಾಖೆಯಿಂದ ಗುಪ್ತಚರ, ಸಣ್ಣ ಕೈಗಾರಿಕೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಇತರೆ ಉಳಿದ ಖಾತೆಗಳನ್ನು ನಿರ್ವಹಿಸಲಿದ್ದಾರೆ.**

**ಉಪಮುಖ್ಯಮಂತ್ರಿ ಗೋವಿಂದ ಎಂ. ಕಾರಜೋಳ ಅವರಿಗೆ ಲೋಕೋಪಯೋಗಿ ಇಲಾಖೆ ಸಚಿವ ಬಿ. ಶ್ರೀರಾಮುಲು ಅವರಿಗೆ ಸಮಾಜ ಕಲ್ಯಾಣ ಇಲಾಖೆ ಹಾಗೂ ಸಚಿವ ಡಾ. ಕೆ. ಸುಧಾಕರ್ ಅವರಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಖಾತೆಗಳನ್ನು ವಹಿಸಲಾಗಿದೆ.**

# ವೆಬಿನಾರ್ ಸರಣಿ ಕಾರ್ಯಕ್ರಮ

ಬೆಂಗಳೂರು, ಅಕ್ಟೋಬರ್ 12 (ಕರ್ನಾಟಕ ವಾರ್ತೆ) :

ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ (ಕೆಸ್ಟೆಪ್ಸ್) ಇವರಿಂದ ಜನ ಸಾಮಾನ್ಯರಿಗೆ ವಿಜ್ಞಾನ ಮತ್ತು ತಂತ್ರಜ್ಞಾನವನ್ನು ತಲುಪಿಸುವ ನಿಟ್ಟಿನಲ್ಲಿ "ಜನಸಾಮಾನ್ಯರಿಗಾಗಿ ವಿಜ್ಞಾನ ಮತ್ತು ತಂತ್ರಜ್ಞಾನ" ಕುರಿತ

ವೆಬಿನಾರ್ ಸರಣಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಈ ವೆಬಿನಾರ್ ಸರಣಿಯಲ್ಲಿ ಪ್ರತಿ ವಾರ ಉಪನ್ಯಾಸ ಕಾರ್ಯಕ್ರಮಗಳನ್ನು ಹಲವಾರು ಗಣ್ಯ ಸಂಪನ್ಮೂಲ ವ್ಯಕ್ತಿಗಳಾದ ಖ್ಯಾತ ಪರಿಸರವಾದಿ ಸುರೇಶ್ ಹೆಬ್ಳೀಕರ್, ಆಕಾಶವಾಣಿ ಕಾರ್ಯಕ್ರಮ ಕಾರ್ಯನಿವಾಹಕರಾದ ಡಾ. ಸುಮಂಗಲ ಮುಮ್ಮಿಗಟ್ಟಿ, ಶ್ರೀನಿವಾಸುಲು (ಐಎಫ್ಎಸ್) ಹಾಗೂ ಸದಸ್ಯ ಕಾರ್ಯದರ್ಶಿಗಳು

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಮಧುಸೂದನ್ ಹೆಚ್ಚುವರಿ ನಿರ್ದೇಶಕರು ಜವಾಹರಲಾಲ್ ನೆಹರು ತಾರಾಲಯ ಹಾಗೂ ಮುಂತಾದವರು ನಡೆಸಿಕೊಡಲಿದ್ದಾರೆ.

ದಿನಾಂಕ 16–10–2020 ರಂದು ಪ್ರಾರಂಭವಾಗಲಿರುವ ಈ ಕಾರ್ಯಕ್ರಮವನ್ನು ಸುರೇಶ್ ಹೆಬ್ಳೀಕರ, ಕನ್ನಡ ಚಿತ್ರ ನಿರ್ಮಾಕರು, ನಿರ್ದೇಶಕರು ಹಾಗೂ ಖ್ಯಾತ ಪರಿಸರವಾದಿ ಇವರು ನಡೆಸಿಕೊಡಲಿದ್ದಾರೆ. ಆಸಕ್ತರು ಹೆಚ್ಚಿನ ಮಾಹಿತಿಗಾಗಿ ksteps.karnataka.gov.in ಗೆ ಭೇಟಿ ನೀಡಬೇಕೆಂದು ಪ್ರಕಟಣೆ ತಿಳಿಸಿದೆ.